## ಕರ್ನಾಟಕ ಸರ್ಕಾರ

**ಸಂಖ್ಯೆ:** ಡಿಟಿಇ 252 ಇಎಸ್‌ಟಿ(7) 2018-19 /97

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:16-04-2019.

**ಕಛೇರಿ ಆದೇಶ**

**ಚುನಾವಣೆ ತುರ್ತು**

**ವಿಷಯ:** 2019ರ ಸಾರ್ವತ್ರಿಕ ಲೋಕಸಭಾ ಚುನಾವಣೆ ಕರ್ತವ್ಯಗಳಿಗೆ ಕಡ್ಡಾಯವಾಗಿ ಹಾಜರಾಗುವ ಬಗ್ಗೆ.

**ಉಲ್ಲೇಖ:** ಮಾನ್ಯ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಸಂದೇಶ ದಿ:15-04-2019.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ, ಬೆಂಗಳೂರು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ, ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರ, ಬೆಂಗಳೂರು ಸೆಂಟ್ರಲ್ ಲೋಕಸಭಾ ಕ್ಷೇತ್ರ ಮತ್ತು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಗಳಿಗೆ ಚುನಾವಣಾ ಸಿಬ್ಬಂದಿಗಳಿಗೆ ಈಗಾಗಲೇ ನಿಯೋಜನೆಗೊಂಡಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಬೆಂಗಳೂರಿನ ನಿರ್ದೇಶಕರ ಕಛೇರಿ ಮತ್ತು ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ದಿನಾಂಕ:17-04-2019ರಂದು ಮಸ್ಟರಿಂಗ್ ಕೇಂದ್ರದಲ್ಲಿ ಕಡ್ಡಾಯವಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ದಿನಾಂಕ:18-04-2019ರಂದು ಚುನಾವಣಾ ಮತಗಟ್ಟೆ ಕರ್ತವ್ಯಕ್ಕೆ ಕಡ್ಡಾಯವಾಗಿ ಹಾಜರಾಗಿ ಕರ್ತವ್ಯ ನಿರ್ವಹಿಸುವಂತೆ ಸೂಚಿಸಲಾಗಿದೆ.

ಚುನಾವಣೆ ಮಸ್ಟರಿಂಗ್ ಮತ್ತು ಚುನಾವಣಾ ಮತಗಟ್ಟೆ ಕರ್ತವ್ಯಕ್ಕೆ ಹಾಜರಾಗದಿದ್ದರೆ ಪ್ರಜಾಪ್ರತಿನಿಧಿ ಕಾಯ್ದೆ 1951ರ ಸೆಕ್ಷನ್ 134ರ ಅನ್ವಯ ವಿಚಾರಣಾರ್ಹ ದಂಡನಾ ಕ್ರಮ ಜರುಗಿಸಲಾಗುವುದು ಮತ್ತು ತಪ್ಪಿತಸ್ಥ ಅಧಿಕಾರಿ ಬಗ್ಗೆ ತಕ್ಷಣ ಎಫ್‌ಐಆರ್ ದಾಖಲಿಸಲಾಗುವುದು ಹಾಗೂ ಅಂತಹ ಅಧಿಕಾರಿಯನ್ನು ಜಿಲ್ಲಾ ಚುನಾವಣಾ ಅಧಿಕಾರಿ ಮುಂದೆ ಹಾಜರು ಪಡಿಸಲು ಬಂಧನದ ವಾರಂಟ್ ಹೊರಡಿಸಲಾಗುವುದು. ಇದಲ್ಲದೆ, ಅಂತಹ ತಪ್ಪಿತಸ್ಥ ಸಿಬ್ಬಂದಿ ವಿರುದ್ಧ ಸಿಸಿಎ ಮತ್ತು ಸೇವಾ ನಿಯಮಗಳ ಸಂಬಂಧಪಟ್ಟ ಉಪಬಂಧಗಳ ಅನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.

**ಕರಡು ನಿರ್ದೇಶಕರಿಂದ ಅನುಮೋದಿಸಿದೆ**

**ಆಡಳಿತಾಧಿಕಾರಿ**

**ಇವರಿಗೆ :** ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ(ಇಲಾಖಾ ವೆಬ್‌ಸೈಟ್ ಮೂಲಕ).

1) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2) ಸರ್ಕಾರಿ ಎಸ್‌ಕೆಎಸ್‌ಜೆಟಿ ಸಂಸ್ಥೆ, ಬೆಂಗಳೂರು.
3) ಸರ್ಕಾರಿ ಎಸ್‌ಕೆಎಸ್‌ಜೆಟಿ ಸಂಜೆ ಸಂಸ್ಥೆ, ಬೆಂಗಳೂರು.
4) ಎಸ್.ಜೆ (ಸರ್ಕಾರಿ) ಪಾಲಿಟೆಕ್ನಿಕ್, ಬೆಂಗಳೂರು.
5) ಎಸ್.ಜೆ (ಸರ್ಕಾರಿ) ಸಂಜೆ ಪಾಲಿಟೆಕ್ನಿಕ್, ಬೆಂಗಳೂರು.

6) ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು.
7) ಸರ್ಕಾರಿ ಜಿ.ಆರ್.ಐ.ಸಿ.ಪಿ ಬೆಂಗಳೂರು.
8) ಸರ್ಕಾರಿ ಎಸ್ಆರ್‌ಸಿ ಐಬಿಎಂ, ಬೆಂಗಳೂರು
9) ಸರ್ಕಾರಿ ತಾಂತ್ರಿಕ ಜವಳಿ ಸಂಸ್ಥೆ, ಬೆಂಗಳೂರು
10) ಸರ್ಕಾರಿ ಪಾಲಿಟೆಕ್ನಿಕ್, ಇಮ್ಮಡಿಹಳ್ಳಿ ಬೆಂಗಳೂರು.
11) ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ ಬೆಂಗಳೂರು.
12) ಸರ್ಕಾರಿ ಫಿಲಂ & ಟಿ.ವಿ. ಸಂಸ್ಥೆ, ಹೆಸರುಗಟ್ಟ, ಬೆಂಗಳೂರು.
13) ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ.
14) ಬಿಎಂಎಸ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು.
15) ಬಿಎಂಎಸ್ (ಸಂಜೆ) ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು.
16) ಡಾ॥ ಅಂಬೇಡ್ಕರ್ ಇನ್ಸಿಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಂಗಳೂರು.
17) ಆಚಾರ್ಯ ಪಾಠಶಾಲ ಪಾಲಿಟೆಕ್ನಿಕ್, ಬೆಂಗಳೂರು.
18) ಎಂ.ಇ.ಐ ಪಾಲಿಟೆಕ್ನಿಕ್, ರಾಜಾಜಿನಗರ, ಬೆಂಗಳೂರು.
19) ಎಂ.ಇ.ಐ (ಸಂಜೆ) ಪಾಲಿಟೆಕ್ನಿಕ್, ರಾಜಾಜಿನಗರ, ಬೆಂಗಳೂರು.
20) ಇಂಪ್ಯಾಕ್ಟ್ ಪಾಲಿಟೆಕ್ನಿಕ್, ಕೊಡಿಗೆಹಳ್ಳಿ, ಬೆಂಗಳೂರು.
21) ಶ್ರೀ ವೆಂಕಟೇಶ್ವರ ಪಾಲಿಟೆಕ್ನಿಕ್, ಬೆಂಗಳೂರು.
22) ಪಿವಿಪಿ ಪಾಲಿಟೆಕ್ನಿಕ್, ಬೆಂಗಳೂರು.
23) ಅಲ್-ಖತೀಬ್ ಪಾಲಿಟೆಕ್ನಿಕ್, ಬೆಂಗಳೂರು.

**ಪ್ರತಿ: ಮಾಹಿತಿಗಾಗಿ,**

1) ಇ-ಆಡಳಿತ ಘಟಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
2) ನಿರ್ದೇಶಕರ ಆಪ್ತ ಶಾಖೆಗೆ.